# ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 687

ವಿಧಾನ ಪರಿಷತ್ತಿನ ಸದಸ್ಯರ ಹೆಸರು : ಶ್ರೀ ಡಿ.ಎಸ್. ಅರುಣ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ)

ಉತ್ತರಿಸಬೇಕಾದ ದಿನಾಂಕ : 22.07.2024

ಉತ್ತರಿಸುವ ಸಚಿವರು : ಆಹಾರ, ನಾಗರಿಕ ಸರಬರಾಜು ಮತ್ತು ಗ್ರಾಹಕರ ವ್ಯವಹಾರಗಳ ಹಾಗೂ ಕಾನೂನು ಮಾಪನಶಾಸ್ತ್ರ ಇಲಾಖೆ ಸಚಿವರು

| ಕ್ರ. ಸಂ | ಪ್ರಶ್ನೆ | ಉತ್ತರ |
|---|---|---|
| ಅ | ರಾಜ್ಯದಲ್ಲಿ ಪ್ರಸ್ತುತ ಸರ್ಕಾರ ರಚನೆ ಆದ ಮೇಲೆ ಎಷ್ಟು ಬಿ.ಪಿ.ಎಲ್ ಪಡಿತರ ಕಾರ್ಡ್‌ಗಳನ್ನು ನೀಡಲಾಗಿದೆ; | 2023-24ನೇ ಸಾಲಿನಿಂದ ಇಲ್ಲಿಯವರೆಗೆ 62,595 ಆದ್ಯತಾ ಪಡಿತರ ಚೀಟಿಗಳಿಗೆ ಅನುಮೋದನೆ ನೀಡಲಾಗಿರುತ್ತದೆ. |
| ಆ | ಸಾರ್ವಜನಿಕರಿಂದ ಹೊಸ ಕಾರ್ಡ್‌ಗಳಿಗೆ ಬೇಡಿಕೆ ಕೇಳಿ ಬರುತ್ತಿದ್ದು, ಹೊಸ ಕಾರ್ಡ್ ನೀಡಲು ಸರ್ಕಾರ ಕೈಗೊಂಡ ಕ್ರಮವೇನು; | ಸರ್ಕಾರದ ಆದೇಶ ಸಂಖ್ಯೆ: ಆನಾಸ 211 ಡಿಆರ್‌ಎ 2021, ದಿನಾಂಕ: 03.12.2021 ಮತ್ತು 28.11.2022 ರನ್ವಯ 2,76,459 ಹಾಗೂ 1,55,927 ಹೊಸ ಆದ್ಯತಾ ಪಡಿತರ ಚೀಟಿಯನ್ನು ಕೋರಿ ಸಲ್ಲಿಸಿರುವ 2,76,459 ಹಾಗೂ 1,55,927 ಅರ್ಹ ಅರ್ಜಿಗಳನ್ನು ವಿಲೇವಾರಿ ಮಾಡಲಾಗಿರುತ್ತದೆ.<br>ಸರ್ಕಾರದ ಆದೇಶ ಸಂಖ್ಯೆ ಆನಾಸ 211 ಡಿಆರ್‌ಎ 2021 ದಿನಾಂಕ: 29.09.2023 ರಲ್ಲಿ 2,95,986 ಅರ್ಜಿಗಳ ವಿಲೇವಾರಿ ಬಗ್ಗೆ ಆದೇಶಿಸಲಾಗಿರುತ್ತದೆ. ಇದರಲ್ಲಿ 62,595 ಹೊಸ ಪಡಿತರ ಚೀಟಿಯನ್ನು ವಿತರಿಸಲಾಗಿದೆ. 56,940 ಅರ್ಜಿಗಳನ್ನು ತಿರಸ್ಕರಿಸಲಾಗಿರುತ್ತದೆ ಬಾಕಿ ಇರುವ 176451 ಅರ್ಜಿಗಳ ಕುರಿತು ಸ್ಥಳ ಪರಿಶೀಲನೆ ಮಾಡಲಾಗಿದೆ. ಈ ಅರ್ಹರಿಗೆ ಹೊಸ ಪಡಿತರ ಚೀಟಿ ನೀಡಲು ತ್ವರಿತವಾಗಿ ವಿಲೇವಾರಿ ಮಾಡಲು ರಾಜ್ಯದ ಜಂಟಿ/ ಉಪ ನಿರ್ದೇಶಕರು, ಆಹಾರ ನಾಗರಿಕ ಸರಬರಾಜು ಮತ್ತು ಗ್ರಾಹಕರ ವ್ಯವಹಾರಗಳ ಇಲಾಖೆ ಇವರಿಗೆ ನಿರ್ದೇಶನ ನೀಡಲಾಗಿರುತ್ತದೆ. |

| | | |
|---|---|---|
| ಇ | ಹೊಸ ಕಾರ್ಡ್ ವಿತರಿಸಲು ಸರ್ಕಾರದಲ್ಲಿ ಮಿತಿಯನ್ನು ಅಳವಡಿಸಲಾಗಿದೆಯೇ; ಹಾಗಿದ್ದಲ್ಲಿ ಜನಸಂಖ್ಯೆಗೆ ಅನುಗುಣವಾಗಿ ಹೊಸ ಕಾರ್ಡ್ ವಿತರಿಸಲು ಸರ್ಕಾರ ಕೈಗೊಂಡ ಕ್ರಮವೇನು; | ರಾಜ್ಯದಲ್ಲಿ ಒಟ್ಟು 43,81,999 ಅಂತ್ಯೋದಯ ಅನ್ನ ಫಲಾನುಭವಿಗಳು ಹಾಗೂ 3,93,02,112 ಆದ್ಯತಾ ಚೀಟಿ ಫಲಾನುಭವಿಗಳು ಒಟ್ಟು 4,36,84,111 ಫಲಾನುಭವಿಗಳು ಇದ್ದು ಎನ್.ಎಫ್.ಎಸ್.ಎ ರಡಿ 4,01,93,000 ಫಲಾನುಭವಿಗಳು ಇದ್ದು ಉಳಿದ 34,91,111 ಫಲಾನುಭವಿಗಳು ರಾಜ್ಯ ಆದ್ಯತಾ ಪಡಿತರ ಚೀಟಿಗಳಾಗಿ ಚಾಲ್ತಿಯಲ್ಲಿರುತ್ತದೆ. ಈಗಾಗಲೇ ಕೇಂದ್ರ ಸರ್ಕಾರವು NFSA ರಡಿ ನಿಗಧಿ ಪಡಿಸಿರುವ ಪಡಿತರ ಚೀಟಿಗಳಮಿತಿ ದಾಟಿರುವುದರಿಂದ ಹೊಸದಾಗಿ ವಿತರಿಸುವ ಆದ್ಯತಾ ಪಡಿತರ ಚೀಟಿಗಳನ್ನು ರಾಜ್ಯ ಆದ್ಯತಾ ಪಡಿತರ ಚೀಟಿಗಳನ್ನಾಗಿ ವಿತರಿಸಲಾಗುವುದು. |
| ಈ | ಅರ್ಹರವಲ್ಲದ ಜನರಿಗೆ ಬಿ.ಪಿ.ಎಲ್ ಕಾರ್ಡ್ ನೀಡಿದ್ದು ಇದರಿಂದ ಅಂತರ ಬಡವರಿಗೆ ಬಿ.ಪಿ.ಎಲ್ ಕಾರ್ಡ್ ಸೌಲಭ್ಯ ವಂಚಿತರಾಗಿದ್ದು ಇದಕ್ಕೆ ಸರ್ಕಾರ ಕೈಗೊಂಡ ಕ್ರಮಗಳೇನು? | ರಾಜ್ಯದಲ್ಲಿ ಆದ್ಯತಾ ಪಡಿತರ ಚೀಟಿಗಳನ್ನು ಪಡೆಯುವ ಬಗ್ಗೆ ಈ ಕೆಳಕಂಡ (ಅನರ್ಹತೆಯನ್ನಾಧರಿಸಿ ಹೊರಗಿಡುವ) ಮಾನದಂಡಗಳನ್ನು ಜಾರಿಯಲ್ಲಿರುತ್ತವೆ.<br>1. ವೇತನವನ್ನು ಗಣನೆಗೆ ತೆಗೆದುಕೊಳ್ಳದೆ ಎಲ್ಲಾ ಖಾಯಂ ನೌಕರರು ಅಂದರೆ ಸರ್ಕಾರದ ಅಥವಾ ಸರ್ಕಾರದಿಂದ ಅನುದಾನವನ್ನು ಪಡೆಯುತ್ತಿರುವ ಸಂಸ್ಥೆಗಳು ಅಥವಾ ಸರ್ಕಾರಿ ಪ್ರಾಯೋಜಿತ ಸರ್ಕಾರಿ ಸ್ವಾಮ್ಯದ ಸಂಸ್ಥೆಗಳು/ ಮಂಡಳಿಗಳು/ನಿಗಮಗಳು/ಸ್ವಾಯತ್ತ ಸಂಸ್ಥೆಗಳು ಇತ್ಯಾದಿ ಒಳಗೊಂಡಂತೆ ಆದಾಯ ತೆರಿಗೆ/ಸೇವಾ ತೆರಿಗೆ/ ವ್ಯಾಟ್/ವೃತ್ತಿ ತೆರಿಗೆ ಪಾವತಿಸುವ ಎಲ್ಲಾ ಕುಟುಂಬಗಳು.<br>2. ಗ್ರಾಮೀಣ ಪ್ರದೇಶಗಳಲ್ಲಿ 03 ಹೆಕ್ಟರ್ ಒಣಭೂಮಿ ಅಥವಾ ತತ್ಸಮಾನ ನೀರಾವರಿ ಭೂಮಿ ಹೊಂದಿರುವ ಕುಟುಂಬಗಳು ಅಥವಾ ಗ್ರಾಮೀಣ ಪ್ರದೇಶವನ್ನು ಹೊರತುಪಡಿಸಿ ನಗರ ಪ್ರದೇಶಗಳಲ್ಲಿ 1000 ಚದರ ಅಡಿಗಿಂತಲೂ ಹೆಚ್ಚಿನ ವಿಸ್ತೀರ್ಣದ ಪಕ್ಕಾ ಮನೆಯನ್ನು ಸ್ವಂತವಾಗಿ ಹೊಂದಿರುವ ಕುಟುಂಬಗಳು.<br>3. ಜೀವನೋಪಾಯಕ್ಕಾಗಿ ಸ್ವತಃ ಓಡಿಸುವ ಒಂದು ವಾಣಿಜ್ಯ ವಾಹನವನ್ನು ಅಂದರೆ ಟ್ರಾಕ್ಟರ್, ಮ್ಯಾಕ್ಸಿಕ್ಯಾಬ್, ಟ್ಯಾಕ್ಸಿ ಇತ್ಯಾದಿಗಳನ್ನು ಹೊಂದಿದ ಕುಟುಂಬವನ್ನು ಹೊರತುಪಡಿಸಿ |

| | | |
|---|---|---|
| | | ನಾಲ್ಕು ಚಕ್ರದ ವಾಹನಗಳನ್ನು ಹೊಂದಿರುವ ಎಲ್ಲಾ ಕುಟುಂಬಗಳು.<br>4. ಕುಟುಂಬದ ವಾರ್ಷಿಕ ಆದಾಯವು ರೂ.1.20 ಲಕ್ಷಗಳಿಗಿಂತಲೂ ಹೆಚ್ಚು ಇರುವ ಕುಟುಂಬಗಳು.<br>ಮೇಲಿನ ಮಾನದಂಡಗಳನ್ವಯ ರಾಜ್ಯದ ಎಲ್ಲಾ ಅರ್ಹ ಫಲಾನುಭವಿಗಳಿಗೆ ಆದ್ಯತಾ ಪಡಿತರ (PHH) ಚೀಟಿಗಳನ್ನು ಕೋರಿ ಸಲ್ಲಿಸಿರುವ ಅರ್ಜಿಗಳ ವಿಲೇವಾರಿಗೆ ಕ್ರಮ ವಹಿಸಲಾಗಿರುತ್ತದೆ.<br>ಅಂತ್ಯೋದಯ ಅನ್ನ ಮತ್ತು ಆದ್ಯತಾ ಪಡಿತರ ಚೀಟಿಗಳನ್ನು ಆದ್ಯತೇತರ ಪಡಿತರ ಚೀಟಿಗಳಾಗಿ ಪರಿವರ್ತಿಸಿ ಹಾಗೂ ಅನರ್ಹರಿಂದ 2020-21ನೇ ಸಾಲಿನಿಂದ ಇಲ್ಲಿಯವರೆವಿಗೂ ಒಟ್ಟು 3,41,632 ಅನರ್ಹ ಆದ್ಯತಾ ಪಡಿತರ ಚೀಟಿಗಳನ್ನು ಪತ್ತೆ ಹಚ್ಚಲಾಗಿದ್ದು ಇವರಿಂದ ಒಟ್ಟು ರೂ. 13,75,20,710 ದಂಡ ವಸೂಲಿ ಮಾಡಲಾಗಿರುತ್ತದೆ. |

ಆನಾಸ 228 ಡಿಆರ್‌ಎ 2024

(ಕೆ.ಹೆಚ್. ಮುನಿಯಪ್ಪ)

ಆಹಾರ, ನಾಗರಿಕ ಸರಬರಾಜು ಮತ್ತು ಗ್ರಾಹಕರ ವ್ಯವಹಾರಗಳ ಹಾಗೂ ಕಾನೂನು ಮಾಪನಶಾಸ್ತ್ರ ಇಲಾಖಾ ಸಚಿವರು